**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ,**

**ಹೊನ್ನಾವರ**

**ಫೌಜುದಾರಿ ಪ್ರಕರಣ ಸಂಖ್ಯೆ : 76/2020**

**ಚಾ.ಸಾಃ2, ಫ್ರಾ.ಸಾಃ2**

| | |
|---|---|
| ಸಾಕ್ಷಿದಾರನ ಹೆಸರು | ಮಂಜುನಾಥ ಭಟ್ಟ |
| ತಂದೆಯ ಹೆಸರು | ಲಕ್ಷ್ಮೀನಾರಾಯಣ ಭಟ್ಟ |
| ವಯಸ್ಸು | 42 ವರ್ಷಗಳು |
| ಉದ್ಯೋಗ | ವ್ಯಾಪಾರ |
| ವಾಸ್ತವ್ಯ | ಕಡತೋಕಾ |

**ಸಾಕ್ಷಿಯನ್ನು ದಿನಾಂಕಃ 12-08-2022 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ಸಾಕ್ಷಿಗೆ ಈ ಪ್ರಕರಣದ ನಿಪಿ-2 ಸ್ಥಳ ಪಂಚನಾಮೆ ಮತ್ತು ನಿಪಿ-3 ಕಚ್ಚಾ ನಕಾಶೆಯನ್ನು ತೋರಿಸಲಾಗಿ ಅವುಗಳ ಮೇಲಿನ ಸಹಿಗಳನ್ನು ಸಾಕ್ಷಿ ಗುರುತಿಸಿದ್ದರಿಂದ ಸದರಿ ಸಹಿಗಳನ್ನು ಕ್ರಮವಾಗಿ ನಿಪಿ-2(ಬಿ) ಮತ್ತು 3(ಬಿ) ಎಂದು ಗುರುತಿಸಲಾಯಿತು.

ಸದರಿ ಸಹಿಗಳನ್ನು ದಿನಾಂಕ 09-03-2020 ರಂದು ಬಾದಳ್ಳಿಯಲ್ಲಿರುವ ಚಾಸಾ-1 ರವರ ಮನೆಯ ಬಳಿ ಅವರ ಮನೆಯಲ್ಲಿ ಕಳ್ಳತನವಾಗಿದ್ದಕ್ಕೆ ಸಂಬಂಧಿಸಿದಂತೆ ಮಾಡಿರುತ್ತೇನೆ. ಸ್ಥಳಕ್ಕೆ ಪೋಲಿಸರು ಬಂದಿದ್ದರು. ನಾನು ಮತ್ತು ಚಾಸಾ-3 ಗೋಪಾಲ ಭಟ್ಟರು ಸಾಕ್ಷಿಗಳಾಗಿದ್ದೆವು. ಪೋಲಿಸರು ಸ್ಥಳದಲ್ಲಿ ಪಂಚನಾಮೆ ಮಾಡಿ ಹಾತ್ ನಕಾಶೆಯನ್ನು ತಯಾರಿಸಿ ಛಾಯಾಚಿತ್ರ ತೆಗೆಸಿರುತ್ತಾರೆ. ಛಾಯಾಚಿತ್ರವನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿ ನಿಪಿ-4 ರಿಂದ 7 ಛಾಯಾಚಿತ್ರದಲ್ಲಿ ತನ್ನ ಇರುವಿಕೆಯನ್ನು ಒಪ್ಪಿಕೊಂಡಿರುತ್ತಾರೆ.

**ಪಾಟೀ ಸವಾಲುಃ ಆರೋಪಿಗಳ ಪರ ವಕೀಲರಾದ ಶ್ರೀ ವಿಠ್ಠಲ ಎಂ. ಭಂಡಾರಿಯವರಿಂದಃ**

ಚಾಸಾ-1 ನನ್ನ ಪಕ್ಕದ ಮನೆಯವರು. ಪಂಚನಾಮೆ ಸಂದರ್ಭದಲ್ಲಿ ಸ್ಥಳದಲ್ಲಿ ನಾನು, ಚಾಸಾ-3, ಚಾಸಾ-1 ಮತ್ತು ಪೋಲಿಸರು ಇದ್ದೆವು. ಸದರಿ ಪಂಚನಾಮೆಯಡಿ ಪೋಲಿಸರು ಯಾವುದೇ ವಸ್ತುಗಳನ್ನು ಜಪ್ತು ಮಾಡಿರುವುದಿಲ್ಲ. ಪಂಚನಾಮೆಯನ್ನು ಚಾಸಾ-1 ಹೇಳಿ ಬರೆಸಿರುತ್ತಾರೆ. ಪಂಚನಾಮೆಯನ್ನು ಬಿಟ್ಟು ಬೇರೆ ಯಾವುದೇ ಸಹಿ ಮಾಡಿರುವುದಿಲ್ಲ. ನಾನು ಠಾಣೆಗೆ ಬಂದಿರುವುದಿಲ್ಲ. ಚಾಸಾ-1 ನನಗೆ ಆರ್ಥಿಕವಾಗಿ ಸಹಾಯ ಮಾಡುತ್ತಿದ್ದರಿಂದ ಅವರ ಮನೆಯ ಬಳಿ ಯಾವುದೇ

ಪಂಚನಾಮೆ ಮಾಡದೇ ಇದ್ದರೂ ಸಹ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ–2 ಮತ್ತು 3 ಕ್ಕೆ ನಾನು ಠಾಣೆಯಲ್ಲಿ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**